ರಸ್ತೆಗಳ ನಿರ್ವಹಣೆಗೆ ಅನುದಾನ

2433(2897); ಶ್ರೀ ಭೂಸನೂರ ರಮೇಶ್ ಬಾಳಪ್ಪ (ಸಿಂಧಗಿ)

ಅ) ವಿಜಯಪುರ ಜಿಲ್ಲೆ ಸಿಂಧಗಿ ಮತಕ್ಷೇತ್ರದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಅಧೀನದಲ್ಲಿ ಎಷ್ಟು ಕಿ.ಮೀ. ರಸ್ತೆ ಇದೆ (ವಿವರ ಒದಗಿಸುವುದು);

ಆ) ಈ ರಸ್ತೆಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು;

ಇ) ಸರ್ಕಾರ ಬಿಡುಗಡೆ ಮಾಡುತ್ತಿರುವ ಅನುದಾನಕ್ಕೆ ರಸ್ತೆ ನಿರ್ವಹಣೆ ಮಾಡಲು ಹಾಗೂ ಸಾರ್ವಜನಿಕ ಸಂಪರ್ಕಕ್ಕೆ ಅನುಕೂಲ ಮಾಡಿಕೊಡಲು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ರಸ್ತೆಗಳ ನಿರ್ವಹಣೆಗಾಗಿ ಪ್ರತಿ ಕಿ.ಮೀ. ರಸ್ತೆಗೆ ಬಿಡುಗಡೆ ಮಾಡುವ ಅನುದಾನದ ಮೊತ್ತ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಸಿಂಧಗಿ ಮತಕ್ಷೇತ್ರದಲ್ಲಿ ಒಟ್ಟು 1071.87 ಕಿ.ಮೀ. ಗ್ರಾಮೀಣ ರಸ್ತೆಗಳು ಇರುತ್ತವೆ. ವಿವರ ಕೆಳಕಂಡಂತಿದೆ.

ಕ್ರ ಸಂ	ರಸ್ತೆ ವಿವರ	ರಸ್ತೆ ಉದ್ದ (ಕಿ.ಮೀಗಳಲ್ಲಿ)
1	ಡಾಂಬರೀಕರಣಗೊಂಡ ರಸ್ತೆ	329.64
2	ಜಲ್ಲಿ ರಸ್ತೆ (ಖಡೀಕರಣ)	145.43
3	ಮಣ್ಣಿನ ರಸ್ತೆ	596.80
	ಒಟ್ಟು	1071.87

ಆ) ಸದರಿ ರಸ್ತೆಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಲ್ಲಿ 2014–15ನೇ ಸಾಲಿನಲ್ಲಿ ಬಿಡುಗಡೆಮಾಡಿ ಅನುದಾನ ವಿವರ ಕೆಳಕಂಡಂತಿದೆ;

ಕ್ರ ಸಂ	ಯೋಜನೆ	ಬಿಡುಗಡೆ ಮೊತ್ತ (ರೂ.ಲಕ್ಷಗಳಲ್ಲಿ)
1	3054–ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ	56.33
2	3054–ಟಾಸ್ಕ್‌ಫೋರ್ಸ	93.26
3	13ನೇ ಹಣಕಾಸು	97.68
4	ನಬಾರ್ಡ್	98.28
5	ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ	178.87
6	ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ–2	272.94
7	ಜಿಐಟ್ಟೆಜಿಬಿಸ್‌ವೈ ನಿರ್ವಹಣೆ	10.74
	ಒಟ್ಟು	808.10

ಇ) ಬಂದಿದೆ.

ಈ) ರಾಜ್ಯದ ಗ್ರಾಮೀಣ ರಸ್ತೆಗಳನ್ನು ವ್ಯವಸ್ಥಿತವಾಗಿ ನಿರ್ವಹಣೆ ಮಾಡಲು ಸ್ಪಷ್ಟವಾದ ನೀತಿ ನಿರೂಪಕ ಮಾರ್ಗದರ್ಶಿ ಸೂತ್ರಗಳನ್ನು ಅಳವಡಿಸುವುದು ಮತ್ತು ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಗೊಳಿಸುವುದು ಅಗತ್ಯವಿರುವುದರಿಂದ ಇದಕ್ಕಾಗಿ ಗ್ರಾಮೀಣ ರಸ್ತೆಯ ಕರಡು ನೀತಿ ಮತ್ತು ಕ್ರಿಯಾ ಯೋಜನೆಯನ್ನು ರೂಪಿಸಲು ಭಾಲ್ಕಿ ಶಿಕ್ಷಣ ಸಂಸ್ಥಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಜನ ಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಅಧಿಕಾರೇತರರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲಾಗಿರುತ್ತದೆ.